ಕರ್ನಾಟಕ ಸರ್ಕಾರ
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**
"ವಾರ್ತಾ ಭವನ", ಡಿ.ಸಿ.ಕಂಪೌಂಡ, ಧಾರವಾಡ-580001. ( 0836-2447469)
ಇ-ಮೇಲ್:- varthabhavandwd74@gmail.com

ದಿನಾಂಕ:19-11-2018
ವಾವಿಸಂ:586

# ಅ.ಭಾ.84 ನೇ ಕನ್ನಡ ಸಾಹಿತ್ಯ ಸಮ್ಮೇಳನ ಉಪಸಮಿತಿಗಳು ಸ್ಪಷ್ಟ ಕಾರ್ಯಸೂಚಿ ರೂಪಿಸಿಕೊಳ್ಳಬೇಕು – ಜಿಲ್ಲಾಧಿಕಾರಿ ದೀಪಾ ಚೋಳನ್

**ಧಾರವಾಡ ( ಕರ್ನಾಟಕ ವಾರ್ತೆ) ನ.19:** ಬರುವ ಜನವರಿ 4, 5 ಹಾಗೂ 6 ರಂದು ಧಾರವಾಡದಲ್ಲಿ ಆಯೋಜಿಸಲಾಗುತ್ತಿರುವ ಅ.ಭಾ.84 ನೇ ಕನ್ನಡ ಸಾಹಿತ್ಯ ಸಮ್ಮೇಳನದ ಯಶಸ್ಸಿಗೆ ರಚಿಸಲಾಗಿರುವ ಎಲ್ಲ ಉಪಸಮಿತಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಸಮಿತಿಗಳು ತಮ್ಮ ಕರ್ತವ್ಯ, ಜವಾಬ್ದಾರಿಗಳನ್ನು ಸ್ಪಷ್ಟವಾಗಿ ತಿಳಿದುಕೊಳ್ಳಬೇಕು. ಹಿಂದಿನ ಸಮ್ಮೇಳನಗಳ ಆಯೋಜಕರಿಂದ ಮಾರ್ಗದರ್ಶನ ಪಡೆಯಬೇಕು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು ಎಲ್ಲ ಉಪಸಮಿತಿಗಳಿಗೆ ಲಿಖಿತವಾಗಿ ತಮ್ಮ ಸಲಹೆಗಳನ್ನು ಮಾಹಿತಿಪೂರ್ವಕವಾಗಿ ನೀಡಿ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ದೀಪಾ ಚೋಳನ್ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ನಡೆದ ಎಲ್ಲ ಉಪಸಮಿತಿಗಳ ಕಾರ್ಯಾಧ್ಯಕ್ಷರ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಸಮ್ಮೇಳನದ ಅಂಗವಾಗಿ ಏರ್ಪಡಿಸುವ ಪುಸ್ತಕ ಪ್ರದರ್ಶನ, ವಾಣಿಜ್ಯ ಮಳಿಗೆ, ವಸತಿ, ಸ್ವಯಂ ಸೇವಕರು, ಆಹಾರ, ನೋಂದಣಿ, ಮಾಧ್ಯಮ ಕೇಂದ್ರ, ಪ್ರಚಾರ, ಮೆರವಣಿಗೆ, ವೇದಿಕೆ, ಅಲಂಕಾರ, ಸಾಂಸ್ಕೃತಿಕ ಕಾರ್ಯಕ್ರಮಗಳು, ಸ್ವಚ್ಛತೆ, ಸುರಕ್ಷತೆ, ಮಹಿಳಾ ಸಮಿತಿಗಳು ಸೇರಿದಂತೆ ವಿವಿಧ ಸಮಿತಿಗಳ ಕಾರ್ಯಯೋಜನೆ ಬಗ್ಗೆ ಮಾಹಿತಿ ಪಡೆದ ಜಿಲ್ಲಾಧಿಕಾರಿಗಳು, ಎಲ್ಲ ಉಪಸಮಿತಿಗಳು ಕೂಡಲೇ ತಮ್ಮ ಸಮಿತಿಗಳ ಅಧ್ಯಕ್ಷರು ಹಾಗೂ ಅಧಿಕಾರೇತರ ಸದಸ್ಯರ ಸಭೆ ನಡೆಸಿ ಸ್ಪಷ್ಟ ಕಾರ್ಯಸೂಚಿ ಹಾಕಿಕೊಂಡು, ಅನುಷ್ಠಾನಗೊಳಿಸಲು ಆರಂಭಿಸಬೇಕು. ಪ್ರತಿ 4-5 ದಿನಗಳಿಗೊಮ್ಮೆ ಎಲ್ಲ ಸಮಿತಿಗಳ ಕಾರ್ಯಾಧ್ಯಕ್ಷರ ಸಭೆ ನಡೆಸಿ ಪ್ರಗತಿ ಪರಿಶೀಲಿಸಲಾಗುವದು ಎಂದರು.

ಹುಬ್ಬಳ್ಳಿ ಧಾರವಾಡ ಪೊಲೀಸ್ ಆಯುಕ್ತ ಎಂ.ಎನ್.ನಾಗರಾಜ ಮಾತನಾಡಿ, ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಯಶಸ್ವಿಗೆ ಎಲ್ಲ ಸಮಿತಿಗಳ ನಡುವೆ ಸಮನ್ವಯ ಬಹಳ ಅಗತ್ಯ, ಪೊಲೀಸ್ ಇಲಾಖೆಯು ಸರ್ವ ಸಹಕಾರ ನೀಡಲಿದೆ ಎಂದರು.

ಅಪರ ಜಿಲ್ಲಾಧಿಕಾರಿ ಇಬ್ರಾಹಿಂ ಮೈಗೂರ, ಉಪವಿಭಾಗಾಧಿಕಾರಿ ಮಹ್ಮದ್ ಜುಬೇರ್, ಸಾರ್ವಜನಿಕ ಶಿಕ್ಷಣ ಇಲಾಖೆ ಅಪರ ಆಯುಕ್ತ ಮೇಜರ್ ಸಿದ್ಧಲಿಂಗಯ್ಯ ಹಿರೇಮಠ, ಉಪ ಪೊಲೀಸ್ ಆಯುಕ್ತ ಬಿ.ಎಸ್.ನೇಮಗೌಡ, ಮಹಾನಗರಪಾಲಿಕೆ ಆಯುಕ್ತ ಶಕೀಲ್ ಅಹ್ಮದ್, ಆಹಾರ ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಸದಾಶಿವ ಮರ್ಜಿ, ರಂಗಾಯಣ ಆಡಳಿತಾಧಿಕಾರಿ ಕೆ.ಹೆಚ್.ಚನ್ನೂರ, ಅಬಕಾರಿ ಉಪ ಆಯುಕ್ತ ಬಿ.ಆರ್.ಹಿರೇಮಠ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ವಾವಿಸಂ:587

# ನವೆಂಬರ್ 23 ಮತ್ತು 24 ರಂದು ಕನ್ನಡದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಸಮ್ಮೇಳನ

**ಧಾರವಾಡ (ಕರ್ನಾಟಕ ವಾರ್ತೆ) ನ.19:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯ ಹಾಗೂ ಪ್ರಾದೇಶಿಕ ವಿಜ್ಞಾನ ಕೇಂದ್ರದ ಸಹಯೋಗೊದೊಂದಿಗೆ ನವೆಂಬರ್ 23 ಶುಕ್ರವಾರ ಮತ್ತು 24 ಶನಿವಾರದಂದು ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಸುರ್ವರ್ಣ ಮಹೋತ್ಸವ ಸಭಾಂಗಣದಲ್ಲಿ ಕನ್ನಡದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಸಮ್ಮೇಳನವನ್ನು ಆಯೋಜಿಸಲಾಗಿದೆ.

ನವೆಂಬರ್ 23 ಶುಕ್ರವಾರ ಬೆಳಿಗ್ಗೆ 10:30 ಗಂಟೆಗೆ ಕರ್ನಾಟಕ ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರು ಸಮ್ಮೇಳನವನ್ನು ಉದ್ಘಾಟಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಪ್ರಮೋದ ಗಾಯಿ ಅವರು ವಹಿಸುವರು.

ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ, ಸಂಸದ ಪ್ರಹ್ಲಾದ ಜೋಶಿ ಅವರು ಮುಖ್ಯ ಅತಿಥಿಗಳಾಗಿ ಹಾಗೂ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಅಧ್ಯಕ್ಷರಾದ ಪದ್ಮಶ್ರೀ ಡಾ. ಎಸ್.ಕೆ.ಶಿವಕುಮಾರ್, ಶಾಸಕರಾದ ಎಸ್.ವಿ.ಸಂಕನೂರ ಅವರು ಗೌರವಾನ್ವಿತ ಅತಿಥಿಗಳಾಗಿ ಭಾಗವಹಿಸುವರು.

ಅಂದು ಮಧ್ಯಾಹ್ನ 12:30 ರಿಂದ 2:45ರವರೆಗೆ ಬಾಹ್ಯಾಕಾಶ ತಂತ್ರಜ್ಞಾನ ಮತ್ತು ಮಾಹಿತಿ ತಂತ್ರಜ್ಞಾನ ಕುರಿತು,ಮಧ್ಯಾಹ್ನ 2:45ಕ್ಕೆ ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಮಹಿಳೆಯರು ಎಂಬ ವಿಷಯದ ಬಗ್ಗೆ ವಿಚಾರ ಗೋಷ್ಠಿ ನಡೆಯಲಿದೆ. ಹಾಗೂ ಸಂಜೆ 4:15 ರಿಂದ 5 ಗಂಟೆಯವರೆಗೆ ಕೃಷಿ ಕ್ಷೇತ್ರದಲ್ಲಿ ಜೈವಿಕ ತಂತ್ರಜ್ಞಾನದ ಕುರಿತು ತಾಂತ್ರಿಕ ಅಧಿವೇಶನ ನಡೆಯಲಿದೆ.

ಹಾಗೂ ನವೆಂಬರ್ 24 ಶನಿವಾರದಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ವಿದ್ಯುನ್ಮಾನ ತಂತ್ರಜ್ಞಾನ ಮತ್ತು ಆರೋಗ್ಯ ಕುರಿತು ತಾಂತ್ರಿಕ ಅಧಿವೇಶನ ನಡೆಯಲಿದೆ. ಬೆಳಿಗ್ಗೆ 10.45 ರಿಂದ 12 ಗಂಟೆಯವರೆಗೆ ಉನ್ನತ ಶಿಕ್ಷಣದ ಅಗತ್ಯತೆ ಮತ್ತು ಸಾಧ್ಯತೆ. ಆರೋಗ್ಯ ಕುರಿತು, ಮಧ್ಯಾಹ್ನ 2 ರಿಂದ 3:15 ರವರೆಗೆ ಕನ್ನಡ ಮತ್ತು ಡಿಜಿಟಲ್ ತಂತ್ರಜ್ಞಾನ ಕುರಿತು ವಿಚಾರ ಗೋಷ್ಠಿ ಹಾಗೂ ಮಧ್ಯಾಹ್ನ 3:15 ರಿಂದ 4:15ರವರೆಗೆ ವಿಜ್ಞಾನ ಕವನ ವಾಚನ ಸ್ಪರ್ಧೆ ನಡೆಯಲಿದೆ. ಸಂಜೆ 4:30 ರಿಂದ 5:30 ಗಂಟೆಯವರೆಗೆ ಸಮಾರೋಪ ಸಮಾರಂಭ ಮತ್ತು ಬಹುಮಾನ ವಿತರಣೆ ಕಾರ್ಯಕ್ರಮ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

*********